ಸರ್ಕಾರಿ ಶಾಲೆಗಳ ಸಶಕ್ತೀಕರಣ

2468(3408); ಶ್ರೀ ಹ್ಯಾರಿಸ್ ಎನ್.ಎ (ಶಾಂತಿನಗರ)

ಅ) ಸರ್ಕಾರಿ ಶಾಲೆಗಳನ್ನು ಉಳಿಸಿ – ಬೆಳಸಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಸಮಾನವಾಗಿ ಪರಿವರ್ತಿಸುವ ದಿಶೆಯಲ್ಲಿ ಸರ್ಕಾರ ಕೈಗೊಂಡಿರುವ ಪರಿಣಾಮಕಾರಿ ರೀತಿ ನೀತಿಗಳಾವುವು;

ಆ) ಜಾಗತೀಕರಣ, ಖಾಸಗೀಕರಣ ಮತ್ತು ಉದಾರೀಕರಣಗಳಿಂದ ಉಂಟಾದ ಪರಿಣಾಮಗಳಿಂದ ಸರ್ಕಾರಿ ಶಾಲೆಗಳು ತಮ್ಮ ಅಸ್ತತ್ವದಲ್ಲಿ ಆತಂಕವನ್ನೆದುರಿಸುತ್ತಿರುವುದನ್ನು ತಪ್ಪಿಸಲು ಮತ್ತು ಸರ್ಕಾರಿ ಶಾಲೆಗಳ ಜನಪ್ರಿಯತೆಯನ್ನು ಹೆಚ್ಚಿಸುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು; ಸರ್ಕಾರಿ ನೌಕರರು ಮತ್ತಿತರ ಎಲ್ಲಾ ವರ್ಗದವರು ತಮ್ಮ ಮಕ್ಕಳಿಗೆ ಸರ್ಕಾರಿ ಶಿಕ್ಷಣವನ್ನು ನೀಡುವಂತಹ ವಾತಾವರಣ ನಿರ್ಮಾಣದತ್ತ ಸರ್ಕಾರದ ಗಂಭೀರ ಕಾರ್ಯಕ್ರಮಗಳೇನು;

ಇ) ಕೇಂದ್ರ ಸರಕಾರದ ಜನಪ್ರಿಯಗೊಳಿಸಿರುವ ಕೇಂದ್ರೀಯ ಶಾಲೆಗಳ ಮಾದರಿಯಲ್ಲಿ ರಾಜ್ಯದಲ್ಲಿನ ಸರ್ಕಾರಿ ಶಾಲೆಗಳನ್ನು ಮೇಲ್ದರ್ಜೆಗೇರಿಸುವ ಮೂಲಕ ಖಾಸಗೀಕರಣಕ್ಕೆ ಕಡಿವಾಣ ಹಾಕಲು ಸರ್ಕಾರ ವಹಿಸುವುದೇ?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) ಸರ್ಕಾರಿ ಶಾಲೆಗಳನ್ನು ಉಳಿಸಿ – ಬೆಳಸಿ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಸಮಾನವಾಗಿ ಪರಿವರ್ತಿಸುವ ದಿಶೆಯಲ್ಲಿ ಸರ್ಕಾರವು ಹಲವಾರು ಕಾರ್ಯಕ್ರಮಗಳನ್ನು ಮಾಡುತ್ತಿದೆ.

1. ಬಡ ಕುಟುಂಬದಿಂದ ಬಂದ ಮಕ್ಕಳಿಗೆ ಶಾಲೆಯಲ್ಲಿಯೇ ಪೌಷ್ಟಿಕ ಆಹಾರವನ್ನು ನೀಡುವ ಸಲುವಾಗಿ ಅಕ್ಷರ ದಾಸೋಹ ಯೋಜನೆ

2. ಸರ್ಕಾರಿ ಶಾಲೆಗಳ ಒಂದನೇ ತರಗತಿಯ ಹೆಣ್ಣು ಮಕ್ಕಳಿಗೆ ಪ್ರತಿದಿನದ ಹಾಜರಾತಿಗೆ ರೂ. 2/– ಅನ್ನು ಪ್ರೋತ್ಸಾಹಧನವಾಗಿ ನೀಡುವ ಕಾರ್ಯಕ್ರಮ
3. ಸರ್ಕಾರಿ ಶಾಲೆಯ ಮಕ್ಕಳಿಗೆ ಉಚಿತ ಸಮವಸ್ತ್ರ
4. ಪರಿಶಿಷ್ಟಜಾತಿ/ಪರಿಶಿಷ್ಟ ವರ್ಗದ ಮಕ್ಕಳಿಗೆ ಶಾಲಾ ಬ್ಯಾಗ್ ನೋಟ್ ಪುಸ್ತಕ ನೀಡುವ ಯೋಜನೆ.
5. ಹೆಣ್ಣು ಮಕ್ಕಳಿಗೆ ಉಚಿತ ಶಿಕ್ಷಣ.
6. 8ನೇ ತರಗತಿ ಮಕ್ಕಳಿಗೆ ಉಚಿತ ಬೈಸಿಕಲ್

ಆ) ಜಾಗತೀಕರಣ ಖಾಸಗೀಕರಣ ಮತ್ತು ಉದಾರೀಕರಣಗಳಿಂದ ಉಂಟಾದ ಪರಿಣಾಮಗಳಿಂದ ಸರ್ಕಾರಿ ಶಾಲೆಗಳು ತಮ್ಮ ಅಸ್ತಿತ್ವದಲ್ಲಿ ಆತಂಕವನ್ನೆದುರಿಸುತ್ತಿರುವುದನ್ನು ತಪ್ಪಿಸಲು ಸರ್ಕಾರವು ಪ್ರಶ್ನೆ(1)ರಲ್ಲಿ ಉತ್ತರಿಸಿರುವಂತಹ ಪ್ರೋತ್ಸಾಹದಾಯಕ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ.

ಇ) ರಾಜ್ಯ ಸರ್ಕಾರವು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ ಕಾರ್ಯಕ್ರಮದಡಿ ಆದರ್ಶ ವಿದ್ಯಾಲಯ, ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯಗಳನ್ನು ಶೈಕ್ಷಣಿಕವಾಗಿ ಹಿಂದುಳಿದ ತಾಲ್ಲೂಕುಗಳಲ್ಲಿ ಪ್ರಾರಂಭಿಸಿರುತ್ತದೆ.

ರಾಜ್ಯದಲ್ಲಿನ ಎಲ್ಲ ಸರ್ಕಾರಿ ಶಾಲೆಗಳಿಗೆ ಮೂಲಭೂತ ಸೌಲಭ್ಯಗಳನ್ನು ಹಂತ ಹಂತವಾಗಿ ಒದಗಿಸುವ ಮೂಲಕ ಹಾಗೂ ಶಿಕ್ಷಣದ ಗುಣಮಟ್ಟವನ್ನು ವೃದ್ಧಿಸುವ ಮೂಲಕ ಸರ್ಕಾರಿ ಶಾಲೆಗಳನ್ನು ಉತ್ತಮಪಡಿಸಲಾಗುತ್ತಿದೆ.